8.	ನಾಗರೀಕ ಹಕ್ಕು ಜಾರಿ ನಿರ್ದೇಶನಾಲಯ.	15.00
9.	ದೌರ್ಜನ್ಯಕ್ಕೊಳಪಟ್ಟ ಪರಿಶಿಷ್ಟ ಜಾತಿ : ಪರಿಶಿಷ್ಟ ವರ್ಗದವರಿಗೆ ಪರಿಹಾರಧನ	80.78
10.	ಕರ್ನಾಟಕ ಪರಿಶಿಷ್ಟ ಜಾತಿ : ಪರಿಶಿಷ್ಟ ಅಭಿವೃದ್ಧಿ ನಿಗಮ-ಬಂಡವಾಳ ಹೂಡಿಕೆ	-
11.	ವಿಶೇಷ ಘಟಕ ಯೋಜನೆಗೆ ವಿಶೇಷ ಕೇಂದ್ರೀಯ ಸಹಾಯ	2097.36
	ಒಟ್ಟು	3576.64

ಪರಿಶಿಷ್ಟ ವರ್ಗದವರಿಗಾಗಿ

1.	ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ	-
2.	ಗಿರಿಜನ ಉಪ ಯೋಜನೆಗೆ ವಿಶೇಷ ಕೇಂದ್ರಿಯ ಸಹಾಯಧನ	410.99
3.	ಭಾರತ ಸಂವಿಧಾನದ ಅನುಚ್ಛೇದ 275 (1) ರಡಿ	280.03

ರಾಜ್ಯದಲ್ಲಿ ಸಣ್ಣ ಕೈಗಾರಿಕೆಯ ಉತ್ಪನ್ನಗಳಿಗೆ ಮಾರುಕಟ್ಟೆ ಸೌಲಭ್ಯ

2025 (2488) : ಶ್ರೀ ಆತ್ಮಾನಂದ ಎಂ. ಎಸ್. (ಮಂಡ್ಯ) : ಮಾನ್ಯ ಸಣ್ಣ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

(ಅ) ರಾಜ್ಯದಲ್ಲಿ ನೋಂದಣಿಯಾಗಿರುವ ಸಣ್ಣ ಪ್ರಮಾಣದ ಕೈಗಾರಿಕೆಗಳ ಸಂಖ್ಯೆ ಎಷ್ಟು?

(ಆ) ಸಣ್ಣ ಪ್ರಮಾಣದ ಕೈಗಾರಿಕಾ ಉತ್ಪನ್ನಗಳಿಗೆ ಮಾರುಕಟ್ಟೆ ಸೌಲಭ್ಯವನ್ನು ಸರ್ಕಾರವು ನೀಡುತ್ತಿದೆಯೇ?

(ಇ) ಹಾಗಿದ್ದಲ್ಲಿ, ಮಾರುಕಟ್ಟೆ ಸೌಲಭ್ಯವನ್ನು ದೊರಕಿಸಿಕೊಡಲು ಸರ್ಕಾರವು ಯಾವ ಕ್ರಮವನ್ನು ಕೈಗೊಂಡಿದೆ?

ಶ್ರೀ ಎನ್. ಆರ್. ಕಾಶಪ್ಪನವರ್ (ಸಣ್ಣ ಕೈಗಾರಿಕಾ ಸಚಿವರು) :

(ಅ) ಜನವರಿ 2000 ಅಂತ್ಯಕ್ಕೆ 2.48 ಲಕ್ಷ ಸಣ್ಣ ಪ್ರಮಾಣದ ಕೈಗಾರಿಕೆಗಳು ನೋಂದಣಿಯಾಗಿರುತ್ತವೆ.

(ಆ) ಹೌದು

(ಇ) ಸಣ್ಣ ಪ್ರಮಾಣದ ಕೈಗಾರಿಕೆಗಳು ಉತ್ಪಾದಿಸುವ ವಸ್ತುಗಳನ್ನು ಸರ್ಕಾರವೇ ಮಾರಾಟ ಮಾಡುವುದು ಕಷ್ಟ ಸಾಧ್ಯ. ಉದ್ದಿಮೆಗಳು ತಾವು ಉತ್ಪಾದಿಸುವ ವಸ್ತುಗಳಿಗೆ ಮಾರುಕಟ್ಟೆ ಇದೆಯೇ ಎಂಬುದನ್ನು ಪರಿಶೀಲಿಸಿ ಪ್ರಾರಂಭಿಸುವುದು ಅವರ ಜವಾಬ್ದಾರಿಯಾಗಿರುತ್ತದೆ. ಆದರೂ ಸಹ ಕರ್ನಾಟಕ ಸರ್ಕಾರ ಸರ್ಕಾರಿ ಆದೇಶವನ್ನು ಹೊರಡಿಸಿ ಖರೀದಿ ಆದ್ಯತೆ ಶೇ. 15 ರಷ್ಟು

ಬೆಲೆ ಆದ್ಯತೆ, ಐ. ಎಸ್. ಐ ಮಾರ್ಕ್ ಇರುವ ವಸ್ತುಗಳಿಗೆ ಹೆಚ್ಚುವರಿಯಾಗಿ ಶೇಕಡ 2.5 ರಷ್ಟು ಬೆಲೆ ಆದ್ಯತೆ, ಕೆ. ಎಸ್. ಐ. ಎಂ. ಸಿ ಮೂಲಕ ಅತಿ ಸಣ್ಣ ಕೈಗಾರಿಕೆಗಳು ಟೆಂಡರ್‌ನಲ್ಲಿ ಭಾಗವಹಿಸಿದ್ದಲ್ಲಿ ಶೇ. 50 ರಷ್ಟು ಇ. ಎಂ. ಡಿ. ಮತ್ತು ಸೆಕ್ಯುರಿಟಿ ಡಿಪಾಸಿಟ್‌ನಲ್ಲಿ ರಿಯಾಯಿತಿ ಇತ್ಯಾದಿ ಅನೇಕ ಸೌಲಭ್ಯಗಳನ್ನು ನೀಡುತ್ತಾ ಬಂದಿರುತ್ತದೆ. ಇದರಿಂದ ಅನೇಕ ಸಣ್ಣ ಕೈಗಾರಿಕೆಗಳಿಗೆ ಮಾರುಕಟ್ಟೆ ಸಹಾಯ ಸಿಕ್ಕಿರುತ್ತದೆ.

ಮಂಡ್ಯ ಜಿಲ್ಲೆಯಲ್ಲಿ ರೇಷ್ಮೆ ಕೃಷಿ ಕುರಿತು.

2026 (2620) : ಶ್ರೀ ಎಂ.ಎಸ್. ಆತ್ಮಾನಂದ (ಮಂಡ್ಯ) : ಮಾನ್ಯ ರೇಷ್ಮೆ ಮತ್ತು ಜವಳಿ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

(ಅ) ಮಂಡ್ಯ ಜಿಲ್ಲೆಯಲ್ಲಿ ರೇಷ್ಮೆ ಬೆಳೆಯುವ ಪ್ರದೇಶದ ವಿಸ್ತೀರ್ಣವೆಷ್ಟು? (ತಾಲ್ಲೂಕು ವಾರು ವಿವರ ನೀಡುವುದು)

(ಆ) ಮಂಡ್ಯ ಜಿಲ್ಲೆಯಲ್ಲಿ ಇನ್ನೂ ಹೆಚ್ಚು ವಿಸ್ತೀರ್ಣದ ಪ್ರದೇಶದಲ್ಲಿ ರೇಷ್ಮೆ ಬೆಳೆಯನ್ನು ಬೆಳೆಯಲು ಉತ್ತೇಜಿಸಲು ರೈತರಿಗಾಗಿ ವಿಶೇಷ ಕಾರ್ಯಕ್ರಮ ತೆಗೆದುಕೊಳ್ಳಲು ಸರ್ಕಾರ ಉದ್ದೇಶಿಸಿದೆಯೇ?

(ಇ) ರೈತರು ತಾವು ಬೆಳೆದ ರೇಷ್ಮೆಯನ್ನು ದೂರದ:ಮಾರುಕಟ್ಟೆಗೆ ಸಾಗಿಸಲು ಸಾರಿಗೆ ವಾಹನದ ಸೌಲಭ್ಯವಿಲ್ಲದೆ ತುಂಬು ಪ್ರಯಾಸ ಪಡುತ್ತಿರುವುದನ್ನು ಸರ್ಕಾರವು ಮನಗಂಡಿದೆಯೇ?

ಶ್ರೀ ಎಂ. ಮಹದೇವ (ರೇಷ್ಮೆ ಮತ್ತು ಜವಳಿ ಸಚಿವರು) :

(ಅ) ಮಂಡ್ಯ ಜಿಲ್ಲೆಯ ಒಟ್ಟು ಹಿಪ್ಪುನೇರಳೆ ವಿಸ್ತೀರ್ಣ 12216.37 ಹೆಕ್ಟೇರ್‌ಗಳು. ತಾಲ್ಲೂಕುವಾರು ವಿವರಗಳನ್ನು ಅನುಬಂಧದಲ್ಲಿ ನಮೂದಿಸಿದೆ.

(ಆ) 2000-2001ನೇ ವರ್ಷದಲ್ಲಿ ಮಂಡ್ಯ ಜಿಲ್ಲೆಯಲ್ಲಿ 450 ಹೆಕ್ಟೇರ್ ಹೆಚ್ಚಿನ ಪ್ರದೇಶದಲ್ಲಿ ರೇಷ್ಮೆ ಬೆಳೆಯನ್ನು ಬೆಳೆಯುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

(ಇ) ಮಂಡ್ಯ ಜಿಲ್ಲೆಯ ರೇಷ್ಮೆ ಬೆಳೆಗಾರರು ತಾವು ಬೆಳೆದಂತಹ ಮಿಶ್ರತಳಿ ಗೂಡುಗಳನ್ನು ಮಂಡ್ಯ ಜಿಲ್ಲೆಯ ಮಳವಳ್ಳಿ ಹಾಗೂ ಅಕ್ಕಪಕ್ಕದ ಜಿಲ್ಲೆಯ ಮೂರುಕಟ್ಟೆಗಳಾದ ಕೊಳ್ಳೇಗಾಲ, ಸಂತೇಮರಹಳ್ಳಿ, ರಾಮನಗರ, ಚನ್ನಪಟ್ಟಣ ಇತರೆ ಪ್ರಮುಖ ಗೂಡು ಮಾರುಕಟ್ಟೆಗಳಲ್ಲಿ ಮಾರಾಟ ಮಾಡುತ್ತಿರುತ್ತಾರೆ. ದ್ವಿತಳಿ ಬಿತ್ತನೆ ಗೂಡುಗಳನ್ನು ಕೆ.ಆರ್. ಪೇಟೆಯ ದ್ವಿತಳಿ ರೇಷ್ಮೆ ಗೂಡಿನ ಮಾರುಕಟ್ಟೆಯಲ್ಲಿ ಮಾರಾಟ ಮಾಡುತ್ತಿರುತ್ತಾರೆ. ಈ ಮಾರುಕಟ್ಟೆಗಳಲ್ಲಿ ಹೆಚ್ಚು ಪ್ರಮಾಣದ ರೀಲರ್‌ಗಳ ಗೂಡು ಖರೀದಿಸಲು ಬರುವುದರಿಂದ ಸ್ಪರ್ಧಾತ್ಮಕ ಬೆಲೆಗಳು, ದೊರಕುತ್ತವೆಂಬುವ ಉದ್ದೇಶದಿಂದ ಈ ಜಿಲ್ಲೆಯ ರೈತರು ಸದರಿ ಮಾರುಕಟ್ಟೆಗಳಲ್ಲಿ ಗೂಡುಗಳನ್ನು ಮಾರಾಟ ಮಾಡುತ್ತಿದ್ದು, ಒಳ್ಳೆಯ ಧಾರಣೆಗಳೂ ಸಹ ರೈತರಿಗೆ ದೊರಕುತ್ತಿದೆ.